ಬೆಂಗಳೂರು ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU CITY UNIVERSITY

Office of the Registrar(Evaluation), Jnana Jyothi Central College Campus, Dr. B.R AmbedkarVeedhi, Bengaluru – 560 001.E-mail: registrarevlubcu@gmail.com, regev@bcu.ac.in Ph.No.080-22295559/29572003

ಸಂಖ್ಯೆ:ಬೆಂ.ನ.ವಿ/ಪ.ವಿ/01/2023-24/628 ದಿನಾಂಕ:15.10.2024

# ಸುತ್ತೋಲೆ

ವಿಷಯ : ವಿಶ್ವ ವಿದ್ಯಾನಿಲಯಕ್ಕೆ ವಿದ್ಯಾರ್ಥಿಗಳನ್ನು ಕಳುಹಿಸದಿರುವ ಕುರಿತು.

******

ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ನಡೆಯುವ ಎಲ್ಲಾ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳಿಗೆ ಹಾಗೂ ಸಂಬಂಧಪಟ್ಟ ಎಲ್ಲಾ ಪ್ರಾಂಶುಪಾಲರುಗಳಿಗೆ ಸೂಚಿಸುವುದೇನೆಂದರೆ, ಪರೀಕ್ಷಾ ಶುಲ್ಕ ಪಾವತಿಸಲು ಹೊರಡಿಸಿರುವ/ಹೊರಡಿಸುವ ಅಧಿಸೂಚನೆಯಲ್ಲಿ ನಿಗಧಿಪಡಿಸಲಾದ ದಿನಾಂಕಗಳ ಒಳಗೆ ಪರೀಕ್ಷಾ ಶುಲ್ಕ ಪಾವತಿಸಲು ತಿಳಿಸಲಾಗಿದೆ. ಸಮಯದ ಅಭಾವದಿಂದ ಪರೀಕ್ಷಾ ಶುಲ್ಕ ಪಾವತಿಸುವ ಅವಧಿಯನ್ನು ವಿಸ್ತರಿಸಲಾಗುವುದಿಲ್ಲ. ಆದುದರಿಂದ ಎಲ್ಲಾ ವಿದ್ಯಾರ್ಥಿಗಳು ನಿಗಧಿತ ಸಮಯದೊಳಗೆ ಪರೀಕ್ಷಾ ಶುಲ್ಕ ಪಾವತಿಸಲು ತಿಳಿಸಲಾಗಿದೆ. ನಂತರ ಬರುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಲಾಗುವುದಿಲ್ಲ.

ವಿದ್ಯಾರ್ಥಿಗಳು ನೇರವಾಗಿ ವಿಶ್ವವಿದ್ಯಾನಿಲಯಕ್ಕೆ ಬರುವುದನ್ನು ತಡೆಗಟ್ಟಲು, ಕಾಲೇಜುಗಳ ಪ್ರಾಂಶುಪಾಲರುಗಳು, ಆಯಾ ವಿದ್ಯಾರ್ಥಿಗಳ ಸಮಸ್ಯೆಗಳನ್ನು ತಮ್ಮ ಮಟ್ಟದಲ್ಲಿಯೇ ಬಗೆಹರಿಸಲು ಪ್ರಯತ್ನಿಸಬೇಕು. ಸಾಧ್ಯವಾಗದಿದ್ದರೆ ವಿದ್ಯಾರ್ಥಿಗಳ ಮನವಿಗಳನ್ನು ಕಾಲೇಜುಗಳಲ್ಲಿ ಸ್ವೀಕರಿಸಿ ಸಂಭಂದಪಟ್ಟ ಕಾಲೇಜಿನ ಕೋ-ಆರ್ಡಿನೇಟರುಗಳು ಮಾತ್ರ ವಿಶ್ವವಿದ್ಯಾನಿಲಯಕ್ಕೆ ಬಂದು ಸಮಸ್ಯೆಗಳಿದ್ದರೆ ಪರಿಹರಿಸಿಕೊಳ್ಳಬೇಕು. ವಿದ್ಯಾರ್ಥಿಗಳನ್ನು ಇಲ್ಲಿಗೆ ಕಳುಹಿಸಬಾರದು. ಯಾವುದೇ ವಿದ್ಯಾರ್ಥಿಗಳು, ತಮ್ಮ ಕೈಯಲ್ಲಿ ಬರೆದ ಅರ್ಜಿಗಳನ್ನು ವಿಶ್ವವಿದ್ಯಾನಿಲಯ ಸ್ವೀಕರಿಸುವುದಿಲ್ಲ, ಪ್ರತಿ ವಿದ್ಯಾರ್ಥಿಯು ತಮ್ಮ ಅಹವಾಲುಗಳನ್ನು ಪ್ರಾಂಶುಪಾಲರುಗಳಿಗೆ ನೀಡಿ ಪ್ರಾಂಶುಪಾಲರ ಕಾಲೇಜಿನ ಲೆಟರ್ ಹೆಡ್‌ನಲ್ಲಿ ವಿದ್ಯಾರ್ಥಿಯ ವಿಚಾರವನ್ನು ತಿಳಿಸಿ ನಿಯಮದ ಪ್ರಕಾರ ಪರಿಹರಿಸಲು ಸಾಧ್ಯವಾದರೆ ಮಾತ್ರ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕು. ಈ ವಿಚಾರವನ್ನು ತಮ್ಮ ವಿದ್ಯಾರ್ಥಿಗಳ ಗಮನಕ್ಕೆ ತರಲು ಕೋರಲಾಗಿದೆ.

ಎಲ್ಲಾ ಪ್ರಾಂಶುಪಾಲರುಗಳು ಮೇಲೆ ತಿಳಿಸಿರುವ ವಿಷಯಗಳನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರಲು ಕೋರಲಾಗಿದೆ ಮತ್ತು ತಮ್ಮ ಕಾಲೇಜಿನ ನೋಟೀಸ್ ಬೋರ್ಡಿನಲ್ಲಿ ಈ ಸುತ್ತೋಲೆಯನ್ನು ಪ್ರದರ್ಶಿಸಲು ತಿಳಿಸಲಾಗಿದೆ. ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿದ ದಿನಾಂಕಗಳ ನಂತರ ಯಾವುದೇ ವಿದ್ಯಾರ್ಥಿಯ ಮನವಿಯನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ರವಾನಿಸಬಾರದೆಂದು ಈ ಮೂಲಕ ಕೋರಲಾಗಿದೆ. ಈ ಬಗ್ಗೆ ಪ್ರಾಂಶುಪಾಲರುಗಳು ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001

ಪ್ರತಿಗಳು:

1. ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳನ್ನು ಹೊಂದಿರುವ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು
2. ಕುಲಪತಿಗಳು/ಕುಲಸಚಿವರು(ಆ)/ಕುಲಸಚಿವರು(ಮೌ)/ವಿತ್ತಾಧಿಕಾರಿಯವರ ಆಪ್ತ ಶಾಖೆ ಬೆಂಗಳೂರು ನಗರ ವಿಶ್ವವಿದ್ಯಾಲಯ ಬೆಂಗಳೂರು
3. ಕಛೇರಿ ಪ್ರತಿ.